<u>**ಕರ್ನಾಟಕ ವಿಧಾನ ಪರಿಷತ್ತು**</u>

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1123 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 23.02.2024. (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ವರ್ಗಾವಣೆ) |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ಈವರೆಗೆ ಎಷ್ಟು ಶಿಶು ಆರೈಕೆ ಕೇಂದ್ರಗಳನ್ನು ನಿರ್ಮಿಸಲಾಗಿದೆ. ಹಾಗೂ ಸರ್ಕಾರದ ಗುರಿ ಎಷ್ಟು (ವಿವರ ನೀಡುವುದು) | ಜುಲೈ 2023 ರ ಆಯವ್ಯಯ ಭಾಷಣದ ಕಂಡಿಕೆ 207 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿದಂತೆ, ನರೇಗಾ ಯೋಜನೆಯಡಿ ಅತಿ ಹೆಚ್ಚು ಮಾನವ ದಿನಗಳನ್ನು ಸೃಜಿಸಿರುವ 4000 ಗ್ರಾಮ ಪಂಚಾಯತಿಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲು ಗುರಿ ಹೊಂದಲಾಗಿದೆ.<br><br>ನರೇಗಾ ಕ್ರಿಯಾಶೀಲ ಉದ್ಯೋಗ ಕಾರ್ಡ್ ಹೊಂದಿರುವ ಕುಟುಂಬದ 3 ವರ್ಷದೊಳಗಿನ ಮಕ್ಕಳಿಗೆ ಶಿಶುಪಾಲನಾ ಕೇಂದ್ರಗಳನ್ನು **"ಕೂಸಿನ ಮನೆ"** ಎಂಬ ಹೆಸರಿನಲ್ಲಿ ಪ್ರಾರಂಭಿಸಲಾಗಿದೆ. ಈವರೆವಿಗೂ ಒಟ್ಟು 3136 **"ಕೂಸಿನ ಮನೆ"**ಗಳನ್ನು ಪ್ರಾರಂಭಿಸಲಾಗಿದೆ.<br><br>ಕೂಸಿನ ಮನೆ ಯೋಜನೆಯ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ಸಹಮತಿ ಪಡೆದಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಸಂಬಂಧ ದಿನಾಂಕ: 14.09.2023 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ. |
| (ಆ) | ಶಿವಮೊಗ್ಗ ಜಿಲ್ಲೆಯಲ್ಲಿ ಶಿಶು ಆರೈಕೆ ಕೇಂದ್ರಗಳನ್ನು ನಿರ್ಮಿಸುವ ಗುರಿ ಎಷ್ಟು; | ಶಿವಮೊಗ್ಗ ಜಿಲ್ಲೆಗೆ ಒಟ್ಟು 140 ಕೂಸಿನ ಮನೆ ಕೇಂದ್ರಗಳನ್ನು ಸ್ಥಾಪಿಸಲು ಗುರಿ ನೀಡಲಾಗಿದ್ದು, ಅದರನ್ವಯ 135 ಕೇಂದ್ರಗಳಲ್ಲಿ ಕೂಸಿನ ಮನೆ ಸ್ಥಾಪಿಸಲಾಗಿದೆ. |

| | | |
|---|---|---|
| | ಉಳಿದಿರುವ ಕೇಂದ್ರಗಳೇಷ್ಟು ಗುರಿ ಸಾಧಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ವಿಫಲತೆಗೆ ಕಾರಣಗಳೇನು ಹಾಗೂ ಗುರಿ ಸಾಧಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಉಳಿದಂತೆ 03 ಕೂಸಿನ ಮನೆ ಕೇಂದ್ರಗಳಲ್ಲಿ ಕಟ್ಟಡ ದುರಸ್ಥಿ ಕಾಮಗಾರಿ ಪ್ರಗತಿಯಲ್ಲಿರುತ್ತವೆ ಹಾಗೂ 02 ಕೂಸಿನ ಮನೆ ಕೇಂದ್ರಗಳನ್ನು ಸ್ಥಾಪಿಸಲು ಆಯ್ಕೆ ಮಾಡಲಾಗಿರುವ ಗ್ರಾಮ ಪಂಚಾಯಿತಿಗಳಲ್ಲಿ ಕಟ್ಟಡ ಲಭ್ಯತೆ ಇರುವುದಿಲ್ಲ. ಆದ್ದರಿಂದ ಒಟ್ಟು 05 ಕೂಸಿನ ಮನೆ ಪ್ರಾರಂಭಿಸಲು ಪ್ರಸ್ತುತ ಸಾಧ್ಯವಾಗಿರುವುದಿಲ್ಲ |

ಸಂಖ್ಯೆ: ಗ್ರಾಅಪ 139 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.